## ಸಿಸಿ ಸಂಃ 432/2014

## 2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಹೊಸಕೋಟೆ

| | |
|---|---|
| ಸಾಕ್ಷಿದಾರರ ಹೆಸರು : ಮುನಿಶಾಮಪ್ಪ | ಪಿ ಡಬ್ಲ್ಯೂ - 7 ಸಿ ಡಬ್ಲ್ಯೂ - 5 |
| ತಂದೆ ಹೆಸರುಃ ಚಿನ್ನಪ್ಪ | ಸಾಕ್ಷಿಗೆ ಪ್ರಮಾಣ ವಚನ ಭೋದಿಸಿದ ದಿ:20.05.2026 |
| ವಯಸ್ಸುಃ 55 ವರ್ಷ | |
| ವೃತ್ತಿಃ ವ್ಯವಸಾಯ | |
| ವಾಸ ಸ್ಥಳಃ ಶಿವನಾಪುರ | |

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದಃ**

ನಿ.ಪಿ.2 ರಲ್ಲಿರುವ ಹೆಬ್ಬೆಟ್ಟನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ. ಸದರಿ ಸಹಿಯನ್ನು ನಾನು 7-8 ವರ್ಷಗಳ ಹಿಂದೆ ನಂದಗುಡಿ ಪೋಲೀಸ್ ಠಾಣೆಗೆ ಹೋದಾಗ ಪೋಲಿಸರ ಹೇಳಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ಯಾವ ವಿಚಾರಕ್ಕೆ ಸದರಿ ಸಹಿಯನ್ನು ಮಾಡಿರುತ್ತೇನೆ ಎಂದು ನನಗೆ ತಿಳಿದಿರುವುದಿಲ್ಲ. ನನ್ನ ಮುಂದೆ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ನನ್ನ ಮುಂದೆ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನ್ಯಾಯಾಲಯದ ಮುಂದೆ ಇರುವ ಕಬ್ಬಿನದ ರಾಡ್ ನ್ನು ಸಾಕ್ಷಿಯು ನೋಡಿ ಗುರುತಿಸಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ವಿಚಾರಿಸಬೇಕಾಗಿ ಎಪಿಪಿರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಬೇಕಾಗಿ ನ್ಯಾಯಾಲಯದಲ್ಲಿ ವಿನಂತಿಸಿದ ಮೇರೆಗೆ ಅನುಮತಿಯನ್ನು ನೀಡಿರುತ್ತದೆ.)**

**ಪಾಟೀ ಸವಾಲುಃ ಸರ್ಕಾರದ ಪರವಾಗಿ ಎಪಿಪಿ ರವರಿಂದಃ**

ದಿ.03.01.2014 ರಂದು ಸಂಜೆ 5.45-6.15 ಗಂಟೆಯವರೆಗೆ ಚಾ.ಸಾ.1 ರವರು ತೋರಿಸಿದ ಘಟನಾ ಸ್ಥಳವಾದ ಮೋತಕದಹಳ್ಳಿ ಗ್ರಾಮದ ವೆಂಕಟಾಚಲಪ್ಪರವರ ಜಮೀನಿನ ದೇವಸ್ಥಾನದ ಪಕ್ಕ ನನ್ನ, ಚಾ.ಸಾ.1 ಮತ್ತು 6 ರವರ ಸಮಕ್ಷಮ ಸ್ಥಳ ಪಂಚನಾಮೆಯ ಕ್ರಮ ಜರುಗಿಸಿ, 2 ಕಬ್ಬಿನದ ರಾಡ್‌ನ್ನು ಅಮಾನತ್ತುಪಡಿಸಿಕೊಂಡು ಬರೆದ ಪಂಚನಾಮೆಗೆ ನಾನು, ಚಾಸಾ-1 ಮತ್ತು 6 ರವರು ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಈಗ ನಾನು ಮತ್ತು ಆರೋಪಿ ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ಹೇಳಿದ್ದರಿಂದ, ಆರೋಪಿ ಪರ ಪಾಟೀ ಸವಾಲನ್ನು ಇಲ್ಲ ಎಂದು ಪರಿಗಣಿಸಲಾಯಿತು.

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಎಂ ಒ

Sd/-
2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಹೊಸಕೋಟೆ